ದೂರವಾಣಿ / Phone : 0824-2287276
ಫ್ಯಾಕ್ಸ್ / Fax : 0824-2287424
ಇ-ಅಂಚೆ / E-mail : registrar@mangaloreuniversity.ac.in
registrarmangaloreuniversity@gmail.com
ವೆಬ್‌ಸೈಟ್ / Website : www.mangaloreuniversity.ac.in

# ಮಂಗಳೂರು ವಿಶ್ವವಿದ್ಯಾನಿಲಯ
# MANGALORE UNIVERSITY

ಕ್ರಮಾಂಕ/No. ಮಂವಿ/ಕುಸ/ಸಿಂಡಿ/ಎಸ್2/1/2023/44991

ಕುಲಸಚಿವರ ಕಛೇರಿ,
ಮಂಗಳಗಂಗೋತ್ರಿ – 574 199
ಕರ್ನಾಟಕ, ಇಂಡಿಯಾ

Office of the Registrar,
Mangalagangothri - 574 199
Karnataka, India.

ದಿನಾಂಕ / Date:
20.03.2023

**ತುರ್ತು ರವಾನೆ**

ರಿಗೆ:

**ಶೈಕ್ಷಣಿಕ ಮಂಡಳಿಯ ಎಲ್ಲಾ ಮಾನ್ಯ ಸದಸ್ಯರುಗಳಿಗೆ.**

ಮಾನ್ಯರೇ,

ವಿಷಯ : ದಿನಾಂಕ 16.03.2023ರಂದು ಜರುಗಿದ ಶೈಕ್ಷಣಿಕ ಮಂಡಳಿಯ 2022-23ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಡವಳಿಯ ಬಗ್ಗೆ.

-----

ದಿನಾಂಕ 16.03.2023ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ (ಹೊಸ ಸೆನೆಟ್) ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2022-23ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಡವಳಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ.

ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರು ನಡವಳಿಯ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ನಡವಳಿಯನ್ನು **ರವಾನಿಸಿದ 15 ದಿನಗಳೊಳಗೆ** ಈ ಕಛೇರಿಗೆ ತಲುಪುವಂತೆ ಕಳುಹಿಸಿಕೊಡಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

**ಕುಲಸಚಿವರು**

ಪ್ರತಿಗಳು:

1. ಮಾನ್ಯ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ ಬೆಂಗಳೂರು - 560 001.
2. ಸರಕಾರದ ಅಪರ ಮುಖ್ಯ ಕಾರ್ಯದರ್ಶಿ, (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ

# ಮಂಗಳೂರುವಿಶ್ವವಿದ್ಯಾನಿಲಯ

**ದಿನಾಂಕ16.03.2023ರಂದು ಪೂರ್ವಾಹ್ನಗಂಟೆ 11.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ (ಹೊಸಸೆನೆಟ್) ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2022-23ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಡವಳಿಗಳು**

**ಉಪಸ್ಥಿತರು**

**ಅನುಪಸ್ಥಿತರು**

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು, ಎಲ್ಲಾ ಸದಸ್ಯರುಗಳು, ವಿಶೇಷ ಆಹ್ವಾನಿತರು ಮತ್ತು ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿದರು.

## ಪ್ರಾಸ್ತಾವಿಕ

1. ಮಂಗಳೂರು ವಿಶ್ವವಿದ್ಯಾನಿಲಯದ 41ನೇ ವಾರ್ಷಿಕ ಘಟಿಕೋತ್ಸವ ಸಮಾರಂಭವನ್ನು ಅಚ್ಚುಕಟ್ಟಾಗಿ ನಡೆಸಲಾಗಿರುವ ಬಗ್ಗೆ ಗೌರವಾನ್ವಿತ ರಾಜ್ಯಪಾಲರು ಪ್ರಶಂಸೆ ವ್ಯಕ್ತಪಡಿಸಿರುವ ವಿಚಾರವನ್ನು ಮಾನ್ಯ ಕುಲಪತಿಯವರು ಸಭೆಗೆ ತಿಳಿಸಿದರು. ಸದರಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ಸಹಕರಿಸಿದ ಎಲ್ಲಾ ಸಿಂಡಿಕೇಟು, ಶೈಕ್ಷಣಿಕ ಮಂಡಳಿ ಸದಸ್ಯರುಗಳಿಗೆ ಮತ್ತು ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳು, ಘಟಿಕೋತ್ಸವ ಏರ್ಪಾಟುಗಳಿಗಾಗಿ ರಚಿಸಲಾದ ಎಲ್ಲಾ ಸಮಿತಿ ಸಂಚಾಲಕರು, ಸದಸ್ಯರುಗಳಿಗೆ, ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳಿಗೆ, ವಿದ್ಯಾರ್ಥಿ ಸ್ವಯಂ ಸೇವಕರುಗಳಿಗೆ ಮತ್ತು ಇತರರಿಗೆ ಮಾನ್ಯ ಕುಲಪತಿಯವರು ತಮ್ಮ ಮನದಾಳದ ಕೃತಜ್ಞತೆಗಳನ್ನು ಅರ್ಪಿಸಿದರು.

2. ಮಂಗಳೂರು ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ ದಕ್ಷಿಣ ಕನ್ನಡ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಉಳ್ಳಾಲ ತಾಲೂಕು ಘಟಕ ವತಿಯಿಂದ ದಿನಾಂಕ 17.03.2023ರಂದು ಮಂಗಳ ಸಭಾಂಗಣದಲ್ಲಿ ಉಳ್ಳಾಲ ತಾಲೂಕು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲಿರುವ ವಿಚಾರವನ್ನು ಮಾನ್ಯ ಕುಲಪತಿಯವರು ಸಭೆಯಲ್ಲಿ ತಿಳಿಸಿದರು.

3. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿರುವ ಶ್ರೀ ದಯಾನಂದ ಪೈ ಮತ್ತು ಶ್ರೀ ಪಿ. ಸತೀಶ್ ಪೈ ಯಕ್ಷಗಾನ ಅಧ್ಯಯನ ಕೇಂದ್ರದ ದಶಮಾನೋತ್ಸವ ಪ್ರಶಸ್ತಿ ಹಾಗೂ ಯಕ್ಷಮಂಗಳ ಪ್ರಶಸ್ತಿ ಪ್ರದಾನ ಸಮಾರಂಭವನ್ನು ದಿನಾಂಕ 18.03.2023ರಂದು ಹಮ್ಮಿಕೊಂಡಿರುವುದಾಗಿಯೂ ಹಾಗೂ ಸದರಿ ಸಮಾರಂಭದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸಾಂಸ್ಕೃತಿಕ ನೀತಿಯನ್ನು ಲೋಕಾರ್ಪಣೆಗೊಳಿಸಲಾಗುವ ವಿಚಾರವನ್ನು ತಿಳಿಸಿದರು.

**I. ದಿನಾಂಕ 15.12.2022ರಂದು ನಡೆದ ಶೈಕ್ಷಣಿಕ ಮಂಡಳಿಯ 2022-23ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

**-ದೃಢೀಕರಿಸಲಾಯಿತು.-**

**II. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ವಿನಿಯಮಗಳು /ಪರಿನಿಯಮಗಳು**

-ಯಾವುದೂ ಇರುವುದಿಲ್ಲ.-

**III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:**

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ 4:1 (2022-23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಚಾಲ್ತಿಯಲ್ಲಿರುವ ಡಿ.ಲಿಟ್/ ಡಿ.ಎಸ್ಸಿ. Doctor of Literature (D.Litt), Doctor of Sciences (D.Sc.) ಪದವಿಗೆ ಸಂಬಂಧಿಸಿದ ಪರಿನಿಯಮವನ್ನು ಉನ್ನತೀಕರಿಸಲು/ಮಾರ್ಪಡಿಸುವ ಬಗ್ಗೆ.

**ನಿರ್ಣಯ:** ತಿದ್ದುಪಡಿಗಳೊಂದಿಗೆ ಪರಿಷ್ಕೃತ ವಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:2 (2022-23)

**ವಿಷಯ:** ಮಂಗಳೂರಿನ "ಸ್ವಸ್ತಿಕಾ ನ್ಯಾಷನಲ್ ಸ್ಕೂಲ್" ಎಂಬ ವಿದ್ಯಾಸಂಸ್ಥೆಯ ಹೆಸರನ್ನು "ಸ್ವಸ್ತಿಕಾ ನ್ಯಾಷನಲ್ ಬಿಸಿನೆಸ್ ಸ್ಕೂಲ್" (Swastika National Business School) ಎಂದು ಬದಲಾಯಿಸುವ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:3 (2022-23)

**ವಿಷಯ:** ರಾಷ್ಟ್ರೀಯ ಶಿಕ್ಷಣ ನೀತಿ 2020ರ ಪದವಿ ಮಟ್ಟದ ಕನ್ನಡ ಭಾಷಾ ವಿಷಯದ ತೃತೀಯ ಸೆಮಿಸ್ಟರ್‌ನ ಪರಿಷ್ಕೃತ ಪಠ್ಯಕ್ರಮ ಹಾಗೂ ಚತುರ್ಥ ಸೆಮಿಸ್ಟರ್‌ನ ಕನ್ನಡ ಐಚ್ಛಿಕ ಕೋರ್ಸಿನ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಕನ್ನಡ ಭಾಷಾ ವಿಷಯದ ತೃತೀಯ ಸೆಮಿಸ್ಟರ್‌ನ ಪರಿಷ್ಕೃತ ಪಠ್ಯಕ್ರಮ ಹಾಗೂ ಚತುರ್ಥ ಸೆಮಿಸ್ಟರ್‌ನ ಕನ್ನಡ ಐಚ್ಛಿಕ ಕೋರ್ಸಿನ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:4 (2022-23)

**ವಿಷಯ:** ರಾಷ್ಟ್ರೀಯ ಶಿಕ್ಷಣ ನೀತಿ-2020ರ ಪದವಿ ಮಟ್ಟದ ಹಿಂದಿ ಭಾಷಾ ವಿಷಯದ ಮತ್ತು ಬಿ.ಎ. ಕಾರ್ಯಕ್ರಮದ ಹಿಂದಿ ಕೋರ್ ಕೋರ್ಸಿನ ನಾಲ್ಕನೇ ಸೆಮಿಸ್ಟರ್ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಶೈ.ಮ.ಸಾ.ಸ.4:5 (2022-23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "Rukmini Subbanna Shetty Memorial Sudhakar Shetty Gold Medal" to Top Scorer in Post Graduate Course in Industrial Chemistry ಚಿನ್ನದ ಪದಕ ಪ್ರದಾನ ಮಾಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಮ.ಸಾ.ಸ.4:6 (2022-23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಕಿರಿಯ ಅಭಿಯಂತರರ ಹುದ್ದೆಯ ವೃಂದ ಮತ್ತು ನೇಮಕಾತಿ ನಿಯಮಗಳ ಕರಡು ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಮ.ಸಾ.ಸ.4:7 (2022-23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಉಪಕುಲಸಚಿವ/ಸಮಾನ ವೃಂದದ ಹುದ್ದೆಗಳ ವೃಂದ ಮತ್ತು ನೇಮಕಾತಿ ವಿಧಾನ ಕುರಿತ ಕರಡು ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:8 (2022-23)

**ವಿಷಯ:** "Financial Education & Investment Awareness" ಕೌಶಲ್ಯವರ್ಧಕ ಕೋರ್ಸನ್ನು ಬೋಧಿಸಲು ವಿದ್ಯಾರ್ಹತೆ ನಿಗದಿ ಪಡಿಸುವ ಬಗ್ಗೆ.

**ನಿರ್ಣಯ:** ದಿನಾಂಕ 23.02.2023ರಂದು ನಡೆದ ಜಂಟಿ ನಿಕಾಯಗಳ ಸಭೆಯ ಶಿಫಾರಸ್ಸನ್ನು ಅನಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:9 (2022-23)

**ವಿಷಯ:** ಬಿ.ಎಸ್ಸಿ. (ಫ್ಯಾಶನ್ ಆಂಡ್ ಅಪಾರೆಲ್ ಡಿಸೈನ್) ಕಾರ್ಯಕ್ರಮದ ಶಿರೋನಾಮೆಯನ್ನು ಬಿ.ಎಸ್ಸಿ. (ಫ್ಯಾಶನ್ ಡಿಸೈನ್) ಎಂಬುದಾಗಿ ಬದಲಾಯಿಸುವ ಕುರಿತು.

**ನಿರ್ಣಯ:** ನಿಯಮಾನುಸಾರ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:10 (2022-23)

**ವಿಷಯ:** ಸ್ನಾತಕೋತ್ತರ ಸಂಖ್ಯಾಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಸ್ನಾತಕೋತ್ತರ ಸಂಖ್ಯಾಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:11 (2022-23)

**ವಿಷಯ:** ಸ್ನಾತಕೋತ್ತರ ತುಳು ಕಾರ್ಯಕ್ರಮದ (ವಾರ್ಷಿಕ ಪದ್ಧತಿ) ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಸ್ನಾತಕೋತ್ತರ ತುಳು ಕಾರ್ಯಕ್ರಮದ (ವಾರ್ಷಿಕ ಪದ್ಧತಿ) ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:12 (2022-23)

**ವಿಷಯ:** ಪಿಹೆಚ್.ಡಿ. ಕಾರ್ಯಕ್ರಮವನ್ನು ನಿಯಂತ್ರಿಸುವ ವಿನಿಯಮಕ್ಕೆ ಪೂರಕವಾಗಿ ತಯಾರಿಸಿರುವ ಮಾರ್ಗಸೂಚಿಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:13 (2022-23)

**ವಿಷಯ:** Value Added Course ಗಳನ್ನು ಅಳವಡಿಸುವ ಸಂಬಂಧ ಮಾರ್ಗಸೂಚಿಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಶೈ.ಮ.ಸಾ.ಸ.4:14 (2022-23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅರೆಭಾಷೆ ಸಂಶೋಧನಾ ಕೇಂದ್ರವನ್ನು ಸ್ಥಾಪಿಸುವ ಕುರಿತು ರಚಿಸಲಾದ ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ಶೈ.ಮ.ಸಾ.ಸ.4:15 (2022-23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2021-22ನೇ ಸಾಲಿನ ವಾರ್ಷಿಕ ವರದಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ಸಾ.ಸ.4:16 (2022-23)

**ವಿಷಯ:** ರಾಷ್ಟ್ರೀಯ ಶಿಕ್ಷಣ ನೀತಿ-2020ರ ಪ್ರಥಮ ಮತ್ತು ದ್ವಿತೀಯ ಸೆಮಿಸ್ಟರ್‌ಗಳ ಬಿ.ಕಾಂ. (ಬಿಸಿನೆಸ್ ಡಾಟಾ ಅನಾಲಿಟಿಕ್ಸ್) ಕಾರ್ಯಕ್ರಮದ ಪಠ್ಯಕ್ರಮ ಮತ್ತು ವಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ವಾಣಿಜ್ಯ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಇತರ ವಿಷಯಗಳು:**

1. ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ) ವಿಭಾಗಕ್ಕೆ ಸಂಬಂಧಿಸಿ ಸಾಮಾಜಿಕ ಜಾಲತಾಣ, ಮಾಧ್ಯಮ ಮತ್ತು ಪತ್ರಿಕೆಗಳಲ್ಲಿ ವಿದ್ಯಾರ್ಥಿಗಳಿಂದ, ಸಾರ್ವಜನಿಕರಿಂದ ನಿರಂತರವಾಗಿ ಸ್ವೀಕೃತವಾಗುವ ದೂರು, ಸಲಹೆ, ಇತರೇ ಮಾಹಿತಿಗಳಿಗೆ ಸಂಬಂಧಿಸಿ, ವಿಶ್ವವಿದ್ಯಾನಿಲಯದಿಂದ ನೀಡಬೇಕಾಗಿರುವ ಪ್ರತಿಕ್ರಿಯೆಗಳಿಗೆ ಸಂಬಂಧಿಸಿ, ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ FREQUENTLY ASKED QUESTIONS ಎಂಬ ಕೊಂಡಿ(link)ಯನ್ನು ತೆರೆದು ಆದ್ಯತೆಗನುಗುಣವಾಗಿ ಸದರಿ ಪ್ರಶ್ನೆಗಳಿಗೆ ಉತ್ತರ ನೀಡಲು ಕ್ರಮ ಕೈಗೊಳ್ಳುವುದಾಗಿ ಮಾನ್ಯ ಕುಲಪತಿಯವರು ಸಭೆಯಲ್ಲಿ ತಿಳಿಸಿದರು.
2. ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಕಚೇರಿಗೆ ಭೇಟಿ ನೀಡುವ ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಆಡಳಿತ ಸೌಧ ಕಟ್ಟಡದ ಕೆಳ ಅಂತಸ್ತಿನಲ್ಲಿ ಹೊಸದಾಗಿ counter ನ್ನು ಸ್ಥಾಪಿಸಿಕೊಳ್ಳಲು ಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.
3. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಶೈಕ್ಷಣಿಕ ವರ್ಷ 2022-23ನೇ ಸಾಲಿನ ಸ್ನಾತಕ/ಸ್ನಾತಕೋತ್ತರ ಕಾರ್ಯಕ್ರಮಗಳ ಪರೀಕ್ಷೆಗಳ ಫಲಿತಾಂಶ ಮತ್ತು ಅಂಕಪಟ್ಟಿಗಳನ್ನು ಕ್ಲಪ್ತ ಸಮಯದಲ್ಲಿ ಕಾಲೇಜುಗಳಿಗೆ ವಿಲೇವಾರಿ ಮಾಡಲು ಸೂಕ್ತ ಕ್ರಮಕೈಗೊಳ್ಳಬೇಕಾಗಿ ಸದಸ್ಯರೊಬ್ಬರು ವಿಶ್ವವಿದ್ಯಾನಿಲಯಕ್ಕೆ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ ಕುಲಸಚಿವರು (ಪರೀಕ್ಷಾಂಗ) ಇವರು ಈ ಬಗ್ಗೆ ಕ್ರಮ ವಹಿಸುದಾಗಿ ಸಭೆಯಲ್ಲಿ ತಿಳಿಸಿದರು.
4. ಸಂಯೋಜಿತ ಕಾಲೇಜುಗಳಲ್ಲಿ ನಡೆಸಲಾಗುವ ಕ್ರೀಡೆ, ಪರೀಕ್ಷಾ ಕಾರ್ಯಗಳಿಗೆ ಸಂಬಂಧಿಸಿದ ಖರ್ಚುವೆಚ್ಚಗಳ ಬಿಲ್ಲುಗಳನ್ನು ಮತ್ತು ಮೌಲ್ಯಮಾಪಕರ ಸಂಭಾವನೆಯ ಬಿಲ್ಲುಗಳನ್ನು ಕ್ಲಪ್ತ ಸಮಯದಲ್ಲಿ ಕಾಲೇಜುಗಳಿಗೆ ವಿತರಿಸುವಂತೆ ಸದಸ್ಯರೊಬ್ಬರು ವಿಶ್ವವಿದ್ಯಾನಿಲಯಕ್ಕೆ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ ಕುಲಸಚಿವರು (ಪರೀಕ್ಷಾಂಗ) ಇವರು ಈ ಬಗ್ಗೆ ಕ್ರಮ ವಹಿಸುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| ಕುಲಸಚಿವರು | ಕುಲಪತಿಗಳು. |